# ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್

ಗೇಟ್ ನಂ.14, ಚಿನ್ನಸ್ವಾಮಿ ಕ್ರೀಡಾಂಗಣ, ರಾಜಭವನ ರಸ್ತೆ, ಬೆಂಗಳೂರು

(ಹಿಂದಿನ ಹೆಸರು ಕರ್ನಾಟಕ ಭೂಸೇನಾ ನಿಗಮ ನಿಯಮಿತ)

ಸಂ:ಕೆಆರ್‌ಐಡಿಎಲ್/ಆಡಳಿತ/ಮಾಹಅ/2011-12 ದಿನಾಂಕ:03/05/2011

**-: ಅಧಿಕೃತ ಜ್ಞಾಪನಾ :-**

ವಿಷಯ: ಮಾಹಿತಿ ಹಕ್ಕು ಅಧಿನಿಯಮ 2005ನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಕೆಆರ್‌ಐಡಿಎಲ್‌ನಲ್ಲಿ ನೋಡೆಲ್ ಅಧಿಕಾರಿಯನ್ನು ನೇಮಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಅಧೀನ ಕಾರ್ಯದರ್ಶಿಗಳು, ಸಿಆಸುಇ (ಜನಸ್ಪಂದನ ಕೋಶ-ಮಾಹಿತಿ ಹಕ್ಕು) ಇವರ ಸುತ್ತೋಲೆ ಸಂ:ಸಿಆಸುಇ/18/ಆರ್‌ಟಿಐ/2011 ದಿನಾಂಕ:03/02/2011

2) ಸರ್ಕಾರದ ಕಾರ್ಯದರ್ಶಿಗಳು, (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಸುತ್ತೋಲೆ ಸಂ:ಗ್ರಾಅಪ/41/ಇತರೆ/2011 ದಿನಾಂಕ:14/03/2011

**********

ಮಾನ್ಯ ಸರ್ಕಾರದ ಕಾರ್ಯದರ್ಶಿ, (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇವರ 14/03/2011ರ ಸುತ್ತೋಲೆಯಲ್ಲಿ ಸರ್ಕಾರದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ನೀಡಿರುವ ಸೂಚನೆಗಳ ಪ್ರಕಾರ ಪ್ರತಿ ಜಿಲ್ಲಾ ಪಂಚಾಯತ್ ಹಾಗೂ ಅದರ ವ್ಯಾಪ್ತಿಯ ತಾಲ್ಲೂಕು ಪಂಚಾಯಿತಿಗಳಲ್ಲಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಹಾಗೂ ಅದರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸಾರ್ವಜನಿಕ ಪ್ರಾಧಿಕಾರಗಳು ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯ ಸ್ವಾಯತ್ತ ಸಂಸ್ಥೆಗಳಲ್ಲಿ ಮಾಹಿತಿ ಹಕ್ಕು ಅಧಿನಿಯಮ 2005ರ ಸಂಬಂಧದ ಪ್ರಕರಣಗಳ ವ್ಯವಸ್ಥಿತ ವಿಲೇ ಬಗ್ಗೆ ನೋಡಲ್ ಅಧಿಕಾರಿಗಳನ್ನು ನೇಮಿಸತಕ್ಕದೆಂದು ಈ ಮೂಲಕ ಸೂಚಿಸಿದೆ.

ಸುತ್ತೋಲೆಯಲ್ಲಿ ನೀಡಿರುವ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಹಾಗೂ ಮಾಹಿತಿ ಹಕ್ಕು ಅಧಿನಿಯಮ 2005ರ ಧ್ಯೇಯೋದ್ದೇಶಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಕ್ರಮವಹಿಸುವಂತೆ ಕೋರಿರುತ್ತಾರೆ.

ಮೇಲ್ಕಂಡ ವಿಷಯದ ಬಗ್ಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಜನಸ್ಪಂದನ ಕೋಶ) ಇವರು ದಿನಾಂಕ:03/02/2011ರಲ್ಲಿ ಸುತ್ತೋಲೆ ಜಾರಿ ಮಾಡಿರುತ್ತಾರೆ. ಸದರಿ ಸುತ್ತೋಲೆಯಲ್ಲಿ ಮಾಹಿತಿ ಹಕ್ಕು ಅಧಿನಿಯಮದ ಪರಿಪೂರ್ಣ ಅನುಷ್ಠಾನಕ್ಕಾಗಿ ಪ್ರತಿಯೊಂದು ನಿರ್ದೇಶನಾಲಯದಲ್ಲಿ/ ಜಿಲ್ಲಾ ಕಛೇರಿಗಳಲ್ಲಿ/ ನಿಗಮ ಮಂಡಳಿಗಳಲ್ಲಿ/ ಜಿಲ್ಲಾ ಪಂಚಾಯತ್‌ಗಳಲ್ಲಿ ಗ್ರೂಪ್ "ಎ" ದರ್ಜೆಯ (ಕಛೇರಿ ಮುಖ್ಯಸ್ಥರನ್ನು ಹೊರತುಪಡಿಸಿ ಗ್ರೂಪ್ "ಎ" ದರ್ಜೆಯ ಅಧಿಕಾರಿ ಆ ಕಛೇರಿಯಲ್ಲಿ ಇಲ್ಲದಿದ್ದಲ್ಲಿ ಗ್ರೂಪ್"ಬಿ" ದರ್ಜೆಯ ಅಧಿಕಾರಿ) ಒಬ್ಬ ಹಿರಿಯ ಅಧಿಕಾರಿಯನ್ನು ನೋಡೆಲ್ ಅಧಿಕಾರಿಯನ್ನಾಗಿ ನೇಮಿಸುವಂತೆ ಸೂಚಿಸಲಾಗಿದೆ. ಅಲ್ಲದೇ ಇಲಾಖೆಯ ಮಾಹಿತಿ ಹಕ್ಕು ಅಧಿನಿಯಮದ ಅನುಷ್ಠಾನದ ಹೊಣೆ ನೋಡೆಲ್ ಅಧಿಕಾರಿಯದ್ದಾಗಿರುತ್ತದೆ.

ಸರ್ಕಾರದ ದಿನಾಂಕ:03/02/2011ರ ಹಾಗೂ 14/03/2011ರ ಮೇಲ್ಕಂಡ ಸುತ್ತೋಲೆ ರೀತ್ಯಾ ಕೆಆರ್‌ಐಡಿಎಲ್‌ನಲ್ಲಿ ನೋಡೆಲ್ ಅಧಿಕಾರಿಯನ್ನು ನೇಮಿಸ ಬೇಕಿದ್ದು, ಈ ಪ್ರಯುಕ್ತ ಶ್ರೀ.ಪಿ.ಬಿ. ಕುಪ್ಪದ್ ಪ್ರಧಾನ ವ್ಯವಸ್ಥಾಪಕರು (ಕೇಂದ್ರೀಯ) ಕೆಆರ್‌ಐಡಿಎಲ್ ಕೇಂದ್ರ ಕಛೇರಿ ಇವರನ್ನು ನೋಡೆಲ್ ಅಧಿಕಾರಿಯನ್ನಾಗಿ ನೇಮಿಸಿದೆ. ಸದರಿ ನೋಡೆಲ್ ಅಧಿಕಾರಿಯವರು ಈ ಕೆಳಕಂಡ ಕಾರ್ಯಗಳನ್ನು ನಿರ್ವಹಿಸುವರು.

2ನೇ ಪುಟಕ್ಕೆ

1. ಎಲ್ಲಾ ಸಾರ್ವಜನಿಕ ಪ್ರಾಧಿಕಾರಗಳ/ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಪಟ್ಟಿಯನ್ನು ನಿರ್ವಹಿಸುವುದು ಮತ್ತು ಅದನ್ನು ಕಾಲಕಾಲಕ್ಕೆ ಕಾಲೋಚಿತಗೊಳಿಸಿ ಪ್ರಕಟಿಸುವುದು.
2. ಮಾಹಿತಿ ಕೋರಿ ಸಾರ್ವಜನಿಕ ಪ್ರಾಧಿಕಾರಗಳಲ್ಲಿ ಸ್ವೀಕೃತವಾಗುವ ಅರ್ಜಿಗಳ ವಿಲೇವಾರಿಯ ಮೇಲ್ವಿಚಾರಣೆ, ಹಾಗೂ ಸಕಾಲದಲ್ಲಿ ನಿಗಧಿತ ಅವಧಿಯೊಳಗೆ ಮಾಹಿತಿಯನ್ನು ನೀಡಲು ವ್ಯವಸ್ಥೆ ಮಾಡುವುದು.
3. ಮಾಹಿತಿ ಒದಗಿಸಲು ಶುಲ್ಕ ಸಂದಾಯದ ಅಗತ್ಯತೆ ಇದ್ದಲ್ಲಿ ಅದನ್ನು **ನಿಗಧಿತ ಅವಧಿಯೊಳಗೆ** ಅರ್ಜಿದಾರರಿಗೆ ತಿಳಿಸುವುದು.
4. ಅರ್ಜಿಯನ್ನು ಬೇರೆ ಸಾರ್ವಜನಿಕ ಪ್ರಾಧಿಕಾರಗಳಿಗೆ ವರ್ಗಾಯಿಸಬೇಕಾಗಿದ್ದಲ್ಲಿ ಅದನ್ನು ನಿಗಧಿತ ಅವಧಿಯೊಳಗೆ ವರ್ಗಾಯಿಸಲು ಕ್ರಮ ವಹಿಸುವುದು.
5. ಮಾಹಿತಿ ಹಕ್ಕು ಅಧಿನಿಯಮ, 2005ರ ಅಡಿ ಒದಗಿಸುವ ಮಾಹಿತಿಯ ದತ್ತಾಂಶವನ್ನು ಸಿದ್ಧಪಡಿಸಿ ಕಾಲಕಾಲಕ್ಕೆ ಕಾಲೋಚಿತಗೊಳಿಸಿ ಅಂತರಜಾಲದಲ್ಲಿ ಅಳವಡಿಸುವುದು.
6. ಕರ್ನಾಟಕ ಮಾಹಿತಿ ಆಯೋಗಕ್ಕೆ ವಾರ್ಷಿಕ ವರದಿ ತಯಾರಿಸಲು ಬೇಕಾಗುವ ಎಲ್ಲಾ ಮಾಹಿತಿಯನ್ನು ಸಕಾಲದಲ್ಲಿ ಒದಗಿಸುವುದು.

**ವ್ಯವಸ್ಥಾಪಕ ನಿರ್ದೇಶಕರು,**
**ಕೆಆರ್‌ಐಡಿಎಲ್,ಬೆಂಗಳೂರು.**

ಗೆ,
ಶ್ರೀ. ವಿ.ಬಿ. **ಕುಪ್ಪದ್,**
ಪ್ರಧಾನ ವ್ಯವ್ಥಾಪಕರು (ಕೇಂದ್ರೀಯ)
ಕೆಆರ್‌ಐಡಿಎಲ್, ಕೇಂದ್ರ ಕಛೇರಿ.

ಪ್ರತಿಯನ್ನು:

- ಸರ್ಕಾರದ ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಗ್ರಾ. ಅ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು ಇವರಿಗೆ ಮಾಹಿತಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ.
- ಸರ್ಕಾರದ ಕಾರ್ಯದರ್ಶಿಗಳು, (ಪಂಚಾಯತ್ ರಾಜ್) ಬಹುಮಹಡಿ ಕಟ್ಟಡ, ಬೆಂಗಳೂರು ಇವರಿಗೆ ಮಾಹಿತಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ.
- ನಿರ್ದೇಶಕರು, ಗ್ರಾಮೀಣ ಮೂಲಭೂತ ಸೌಲಭ್ಯಗಳ ವಿಭಾಗ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು ಇವರಿಗೆ ಮಾಹಿತಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ.
- ಎಲ್ಲಾ ಪ್ರಧಾನ ವ್ಯವಸ್ಥಾಪಕರು ಕೆಆರ್‌ಐಡಿಎಲ್, ಬೆಂಗಳೂರು.
- ಎಲ್ಲಾ ಜಂಟಿ ನಿರ್ದೇಶಕರು, ಕೆಆರ್‌ಐಡಿಎಲ್,
- ಎಲ್ಲಾ ಉಪ ನಿರ್ದೇಶಕರು, ಕೆಆರ್‌ಐಡಿಎಲ್,
- ಎಲ್ಲಾ ಸಹಾಯಕ ನಿರ್ದೇಶಕರು, ಕೆಆರ್‌ಐಡಿಎಲ್,